## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರ್ಕಾರದ ವಿವಿಧ ಇಲಾಖೆಗಳು/ ನಿಗಮಗಳು/ ಮಂಡಳಿಗಳು/ ವಿಶ್ವವಿದ್ಯಾಲಯಗಳು/ ಸಹಕಾರ ಸಂಸ್ಥೆಗಳು/ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿ ನೇರನೇಮಕಾತಿ ಹಾಗೂ ಮುಂಬಡ್ತಿಯಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸಲು ತನಿಖಾ ತಂಡಗಳನ್ನು ರಚಿಸುವ ಬಗ್ಗೆ.

**ಓದಲಾಗಿದೆ:**
1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಏಕ ಕಡತ ಸಂಖ್ಯೆ: SWD/REC/1(UR)/35/2024, E-1437235.
2. ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:01-07-2024 ರಂದು ಜರುಗಿದ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ನಡೆದ ಸಚಿವ ಸಂಪುಟ ಉಪ ಸಮಿತಿ ಸಭೆಯ ಸಭಾ ನಡವಳಿ

****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಏಕ ಕಡತದಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ಸರ್ಕಾರದ ವಿವಿಧ ಇಲಾಖೆಗಳು/ ನಿಗಮಗಳು/ ಮಂಡಳಿಗಳು/ ವಿಶ್ವವಿದ್ಯಾಲಯಗಳು / ಸಹಕಾರ ಸಂಸ್ಥೆಗಳು /ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ 2001 ರಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನೇರ ನೇಮಕಾತಿಯಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸಲಾಗಿತ್ತು. 2001ರ ನಂತರ ಸಮಾಜ ಕಲ್ಯಾಣ ಇಲಾಖೆಯಿಂದ ಇಲಾಖೆಗಳಿಗೆ ಭೇಟಿ ನೀಡಿ ಯಾವುದೇ ನೇರ ನೇಮಕಾತಿ ಹಾಗೂ ಮುಂಬಡ್ತಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸಿರುವುದಿಲ್ಲ. ಪ್ರಸ್ತುತ ವಿವಿಧ ಇಲಾಖೆಗಳು / ನಿಗಮಗಳು / ಮಂಡಳಿಗಳು / ವಿಶ್ವವಿದ್ಯಾಲಯಗಳು / ಸಹಕಾರ ಸಂಸ್ಥೆಗಳು /ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನೇರನೇಮಕಾತಿ ಹಾಗೂ ಮುಂಬಡ್ತಿ ಮಾಡುವಾಗ ಬ್ಯಾಕ್‌ಲಾಗ್ ಹುದ್ದೆಗಳನ್ನು ಸದರಿ ಇಲಾಖೆಗಳೇ ಗುರುತಿಸಿಕೊಳ್ಳುತ್ತಿರುವುದು ಹಾಗೂ ಕೆಲವೊಂದು ಇಲಾಖೆಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸದೇ ಇರುವುದು ಕಂಡುಬಂದಿರುತ್ತದೆ. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:10-06-2024 ರಂದು ನಡೆದ ಸಭೆಯಲ್ಲಿ ಸರ್ಕಾರದ ವಿವಿಧ ಇಲಾಖೆಗಳು/ ನಿಗಮಗಳು/ ಮಂಡಳಿಗಳು/ ವಿಶ್ವ ವಿದ್ಯಾಲಯಗಳು/ ಸಹಕಾರ ಸಂಸ್ಥೆಗಳು/ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿ ನೇರನೇಮಕಾತಿ ಹಾಗೂ ಮುಂಬಡ್ತಿಯಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸುವ ಬಗ್ಗೆ ತನಿಖೆ ಕೈಗೊಳ್ಳಲು ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳ ಅಧಿಕಾರಿ/ ಸಿಬ್ಬಂದಿಗಳನ್ನು ನಿಯೋಜಿಸಿಕೊಂಡು ತನಿಖಾ ತಂಡವನ್ನು ರಚಿಸಿ ನಿಯೋಜಿಸುವಂತೆ ನಿರ್ದೇಶನ ನೀಡಿರುತ್ತಾರೆ.

ಸಮಾಜ ಕಲ್ಯಾಣ ಇಲಾಖೆಯ ಅಧೀನ ವ್ಯಾಪ್ತಿಗೆ ಒಳಪಡುವ ಆಯೋಗ / ನಿಗಮ / ಸಂಸ್ಥೆಗಳಲ್ಲಿನ ಅಧಿಕಾರಿ & ಸಿಬ್ಬಂದಿಗಳ ತಂಡಗಳ ವಿವರಗಳೊಂದಿಗೆ ಗೊತ್ತುಪಡಿಸಲಾಗುವ /

S.V
29/08/2024

ನಿಗಧಿಪಡಿಸಲಾಗುವ ಇಲಾಖೆಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳ ಬಗ್ಗೆ ಪರಿಶೀಲನೆ ನಡೆಸಿ, ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ವರದಿ ಸಲ್ಲಿಸುವ ಬಗ್ಗೆ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ನಡೆದ ಸಚಿವ ಸಂಪುಟ ಉಪಸಮಿತಿಯಿಂದ ಅನುಮೋದನೆ ಪಡೆದು, ಸರ್ಕಾರದ ಹಂತದಲ್ಲಿ ಸೂಕ್ತ ಆದೇಶ ಹೊರಡಿಸಲು ಕೋರಿ ಏಕ ಕಡತದಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:01-07-2024 ರಂದು ಜರುಗಿದ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ನಡೆದ ಸಚಿವ ಸಂಪುಟ ಉಪ ಸಮಿತಿ ಸಭೆಯಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸಲು ತನಿಖಾ ತಂಡಗಳನ್ನು ರಚಿಸಲು ಮತ್ತು ತನಿಖಾ ತಂಡಗಳು ಕೈಗೊಳ್ಳಬೇಕಾದ ಕ್ರಮಗಳ ಕುರಿತು ನಿರ್ಣಯ ಕೈಗೊಳ್ಳಲಾಗಿದೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ, ಸರ್ಕಾರವು ದಿನಾಂಕ:01-07-2024 ರಂದು ಜರುಗಿದ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ನಡೆದ ಸಚಿವ ಸಂಪುಟ ಉಪ ಸಮಿತಿ ಸಭೆಯ ನಿರ್ಣಯದನ್ವಯ 05 ತಂಡಗಳನ್ನು ರಚಿಸಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : SWD/275/SLP/2024, ಬೆಂಗಳೂರು**
**ದಿನಾಂಕ:29-08-2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ವಿವಿಧ ಇಲಾಖೆಗಳು/ ನಿಗಮಗಳು/ ಮಂಡಳಿಗಳು/ ವಿಶ್ವ ವಿದ್ಯಾಲಯಗಳು/ ಸಹಕಾರ ಸಂಸ್ಥೆಗಳು/ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿ ನೇರನೇಮಕಾತಿ ಹಾಗೂ ಮುಂಬಡ್ತಿಯಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸುವ ಬಗ್ಗೆ ತನಿಖೆ ಕೈಗೊಂಡು, ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರಿಗೆ ವರದಿ ಸಲ್ಲಿಸಲು ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಆಯೋಗ / ನಿಗಮ / ಸಂಸ್ಥೆಗಳಲ್ಲಿನ ಕೆಳಕಂಡ ಅಧಿಕಾರಿ & ಸಿಬ್ಬಂದಿಗಳನ್ನು ಒಳಗೊಂಡ 05 ತಂಡಗಳನ್ನು ರಚಿಸಿ, ಆದೇಶಿಸಿದೆ.

**ತಂಡ-1**

| ಕ್ರ.ಸಂ | ಅಧಿಕಾರಿ / ಸಿಬ್ಬಂದಿ ಹುದ್ದೆ & ವಿವರ |
|---|---|
| 1 | ನಿರ್ದೇಶಕರು, ಡಾ|| ಬಿ.ಆರ್.ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಬೆಂಗಳೂರು. |
| 2 | ಯೋಜನಾಧಿಕಾರಿಗಳು, ಡಾ|| ಬಿ.ಆರ್.ಅಂಬೇಡ್ಕರ್ ಸಂಶೋಧನಾ ಸಂಸ್ಥೆ. |
| 3 | ಆಡಳಿತಾಧಿಕಾರಿಗಳು, ಡಾ|| ಬಿ.ಆರ್.ಅಂಬೇಡ್ಕರ್ ಸಂಶೋಧನಾ ಸಂಸ್ಥೆ. |
| 4 | ಕಛೇರಿ ಅಧೀಕ್ಷಕರು, ಡಾ|| ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ. |
| 5 | ಪ್ರಥಮ ದರ್ಜೆ ಸಹಾಯಕರು, ಡಾ|| ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ. |

**ತಂಡ-2**

| ಕ್ರ.ಸಂ | ಅಧಿಕಾರಿ / ಸಿಬ್ಬಂದಿ ಹುದ್ದೆ & ವಿವರ |
|---|---|
| 1 | ನಿರ್ದೇಶಕರು, ಡಾ|| ಬಾಬು ಜಗಜೀವನರಾಮ್ ಸಂಶೋಧನಾ ಸಂಸ್ಥೆ, ಬೆಂಗಳೂರು. |

S.V
29/08/2024



Scanned with CamScanner

| | |
|---|---|
| 2 | ಕಛೇರಿ ಅಧೀಕ್ಷಕರು, ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ, ಬೆಂಗಳೂರು. |
| 3 | ತನಿಖಾ ಸಹಾಯಕರು, ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ, ಬೆಂಗಳೂರು. |
| 4 | ಪ್ರಥಮ ದರ್ಜೆ ಸಹಾಯಕರು, ಡಾ\|\| ಬಿ.ಆರ್‌ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಬೆಂಗಳೂರು. |
| 5 | ಪ್ರಥಮ ದರ್ಜೆ ಸಹಾಯಕರು, ಡಾ\|\| ಬಾಬು ಜಗಜೀವನರಾಮ್ ಸಂಶೋಧನಾ ಸಂಸ್ಥೆ, ಬೆಂಗಳೂರು. |

**ತಂಡ-3**

| ಕ್ರ.ಸಂ | ಅಧಿಕಾರಿ / ಸಿಬ್ಬಂದಿ ಹುದ್ದೆ & ವಿವರ |
|---|---|
| 1 | ಕಾರ್ಯದರ್ಶಿಗಳು, ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ, ಬೆಂಗಳೂರು. |
| 2 | ಸಂಶೋಧನಾಧಿಕಾರಿಗಳು, ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ, ಬೆಂಗಳೂರು. |
| 3 | ಸಹಾಯಕ ನಿರ್ದೇಶಕರು (ಗ್ರೇಡ್-2), ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ, ಬೆಂಗಳೂರು. |
| 4 | ಕಛೇರಿ ಅಧೀಕ್ಷಕರು, ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ, ಬೆಂಗಳೂರು. |
| 5 | ಪ್ರಥಮ ದರ್ಜೆ ಸಹಾಯಕರು, ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ, ಬೆಂಗಳೂರು. |

**ತಂಡ-4**

| ಕ್ರ.ಸಂ | ಅಧಿಕಾರಿ / ಸಿಬ್ಬಂದಿ ಹುದ್ದೆ & ವಿವರ |
|---|---|
| 1 | ಕಾರ್ಯದರ್ಶಿಗಳು, ಕರ್ನಾಟಕ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು. |
| 2 | ಸಂಶೋಧನಾಧಿಕಾರಿಗಳು, ಕರ್ನಾಟಕ ಸಫಾಯಿ ಕರ್ಮಚಾರಿಗಳ ಆಯೋಗ. |
| 3 | ಕಛೇರಿ ಅಧೀಕ್ಷಕರು, ಕರ್ನಾಟಕ ಸಫಾಯಿ ಕರ್ಮಚಾರಿಗಳ ಆಯೋಗ. |
| 4 | ಪ್ರಥಮ ದರ್ಜೆ ಸಹಾಯಕರು, ಕರ್ನಾಟಕ ಸಫಾಯಿ ಕರ್ಮಚಾರಿಗಳ ಆಯೋಗ. |
| 5 | ಪ್ರಥಮ ದರ್ಜೆ ಸಹಾಯಕರು, ಕರ್ನಾಟಕ ಸಫಾಯಿ ಕರ್ಮಚಾರಿಗಳ ಆಯೋಗ. |

**ತಂಡ-5**

| ಕ್ರ.ಸಂ | ಅಧಿಕಾರಿ / ಸಿಬ್ಬಂದಿ ಹುದ್ದೆ & ವಿವರ |
|---|---|
| 1 | ಅಪರ ನಿರ್ದೇಶಕರು / ಜಂಟಿ ನಿರ್ದೇಶಕರು (ಮಿ.ಜಾ.ಕೋ), ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು. |
| 2 | ಉಪ ನಿರ್ದೇಶಕರು, (ಮಿ.ಜಾ.ಕೋ), ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು. |
| 3 | ಕಛೇರಿ ಅಧೀಕ್ಷಕರು (ಮಿ.ಜಾ.ಕೋ), ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು. |
| 4 | ತನಿಖಾ ಸಹಾಯಕರು,(ಮಿ.ಜಾ.ಕೋ),ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು. |
| 5 | ತನಿಖಾ ಸಹಾಯಕರು,(ಮಿ.ಜಾ.ಕೋ), ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು. |

S.V
29/08/2024

- ತಂಡಗಳು ನಿರ್ವಹಿಸಬೇಕಾದ ಕರ್ತವ್ಯಗಳ ಬಗ್ಗೆ ಮತ್ತು ಮೀಸಲಾತಿ ವಿಷಯಗಳ ಬಗ್ಗೆ ತಂಡಗಳಿಗೆ ಅಗತ್ಯ ತರಬೇತಿಯನ್ನು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಇವರು ನೀಡುವುದು.
- ತಂಡಗಳನ್ನು ಇಲಾಖಾವಾರು / ನಿಗಮಗಳು/ಮಂಡಳಿಗಳು/ ವಿಶ್ವವಿದ್ಯಾಲಯಗಳು/ ಸಹಕಾರ ಸಂಸ್ಥೆಗಳು/ ಅನುದಾನಿತ ಶಿಕ್ಷಣ ಸಂಸ್ಥೆವಾರು ನಿಯೋಜಿಸಿ ಮಾಹಿತಿ ಪಡೆಯುವುದು.
- ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಮುಂಬಡ್ತಿ ನೀಡುವಾಗ 5 ವರ್ಷ ಸೇವಾ ಅವಧಿ ಪೂರ್ಣಗೊಳಿಸಿರುವ ಅಧಿಕಾರಿ/ ನೌಕರರು ಮುಂಬಡ್ತಿಗೆ ಲಭ್ಯವಿಲ್ಲದಿದ್ದಲ್ಲಿ ಅದನ್ನು ಮೂರು ವರ್ಷ ಸೇವಾವಧಿ ಎಂದು ತಿದ್ದುಪಡಿ ಮಾಡಿರುವ ಬಗ್ಗೆ ಪರಿಶೀಲಿಸುವುದು.

ಮೇಲ್ಕಂಡ ಎಲ್ಲಾ ತಂಡಗಳು ಈ ಕೆಳಕಂಡ ಅಂಶಗಳ ಬಗ್ಗೆ ಪರಿಶೀಲನೆ ನಡೆಸಿ, ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ವರದಿ ಸಲ್ಲಿಸುವುದು.

1. ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸಿರುವ ಬಗ್ಗೆ, ಈ ಹಿಂದೆ ಗುರುತಿಸಿದ ಹುದ್ದೆಗಳನ್ನು ಭರ್ತಿ ಮಾಡದೇ ಇರುವ ಬಗ್ಗೆ.
2. ನೇರ ನೇಮಕಾತಿ ಮತ್ತು ಮುಂಬಡ್ತಿಯಲ್ಲಿನ ಮೀಸಲಾತಿ ಅನುಷ್ಠಾನಗೊಳಿಸುತ್ತಿರುವ ಬಗ್ಗೆ.
3. ನಿಗದಿತ ನಮೂನೆಯ ರೋಸ್ಟರ್ ರಿಜಿಸ್ಟರ್‌ನ್ನು ನಿರ್ವಹಿಸುವ ಬಗ್ಗೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Kalavathi S.V 29/08/2024
(ಕಲಾವತಿ ಎಸ್.ವಿ)
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:-**

1. ಮಹಾಲೇಖಪಾಲರು (ಎ&ಇ ಲೆಕ್ಕ ಪರಿಶೋಧನೆ-1, 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಡಾ|| ಬಿ.ಆರ್‌ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಬೆಂಗಳೂರು
4. ನಿರ್ದೇಶಕರು, ಡಾ|| ಬಾಬು ಜಗಜೀವನ್‌ರಾಂ ಸಂಶೋಧನಾ ಸಂಸ್ಥೆ, ಮಾಗಡಿ ರಸ್ತೆ, ಬೆಂಗಳೂರು.
5. ಕಾರ್ಯದರ್ಶಿಗಳು, ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ, ಬೆಂಗಳೂರು.
6. ಕಾರ್ಯದರ್ಶಿಗಳು, ಕರ್ನಾಟಕ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.



Scanned with CamScanner

7. ಅಪರ ನಿರ್ದೇಶಕರು / ಜಂಟಿ ನಿರ್ದೇಶಕರು (ಮಿ.ಜಾ.ಕೋ), ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
8. ಕಂಟ್ರೋಲ್ ರೂಂ, ಸಮಾಜ ಕಲ್ಯಾಣ ಇಲಾಖೆ, ಕಲ್ಯಾಣ ಕೇಂದ್ರ, ನೃಪತುಂಗ ರಸ್ತೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಟ್ಟಡ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**<u>ಪ್ರತಿ ಮಾಹಿತಿಗಾಗಿ:-</u>**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಜಂಟಿ/ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ-1 ಮತ್ತು 2 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.

*****